ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

ರಾಜ್ಯದಲ್ಲಿರುವ ಪಶು ಚಿಕಿತ್ಸಾಲಯಗಳ ಕುರಿತು

ಶ್ರೀ ಎಸ್. ವ್ಹಿ. ಸಂಕನೂರ(ಪದವೀಧರರ ಕ್ಷೇತ್ರ):-

924 (1130) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ 5 ವರ್ಷಗಳಿಂದ ರಾಜ್ಯದಲ್ಲಿ ಎಷ್ಟು ಪಶು ಚಿಕಿತ್ಸಾಲಯಗಳನ್ನು ಪ್ರಾರಂಭಿಸಲಾಗಿದೆ; ಇದರಲ್ಲಿ ಎಷ್ಟು ಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೇರಿಸುವ ಕಾರ್ಯವನ್ನು ಕೈಗೊಂಡಿದೆ ;

(ಆ) ಇಂತಹ ಚಿಕಿತ್ಸಾಲಯಗಳಲ್ಲಿ ವೈದ್ಯಕೀಯ ಹಾಗೂ ವೈದ್ಯಕೇತರ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ರಾಜ್ಯದಲ್ಲಿ ಎಷ್ಟು ಸರ್ಕಾರಿ ಪಶು ಚಿಕಿತ್ಸಾಲಯಗಳು ಕಾರ್ಯನಿರ್ವಹಿಸುತ್ತಿವೆ; ಇನ್ನೂ ಪ್ರಸ್ತಾವನೆಯಲ್ಲಿರುವ ಸಂಚಾರಿ ಪಶು ಚಿಕಿತ್ಸಾಲಯಗಳು ಎಷ್ಟು ?